ಗ್ರಾಮವನ್ನು ಸ್ಥಳಾಂತರಿಸುವುದು

34 (514), ಶ್ರೀ ಹೆಚ್.ಕೆ.ಕುಮಾರ ಸ್ವಾಮಿ (ಸಕಲೇಶಪುರ)

ಪ್ರಶ್ನೆಗಳು

ಅ) ಹಾಸನ ತಾಲ್ಲೂಕು ಗೊರೂರು ಗ್ರಾಮವನ್ನು ಭಾಗಶಃ ಸ್ವಾಧೀನ ಮಾಡಿಕೊಳ್ಳುವ ಪ್ರಕ್ರಿಯೆ ನಡೆಸಲಾಗಿರುವುದು ನಿಜವೇ?

ಶ್ರೀ. ಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು)

ಉತ್ತರಗಳು

ಅ) ಹೇಮಾವತಿ ಮತ್ತು ಯಗಚಿ ಯೋಜನೆಗಳಲ್ಲಿ ಶೀತಪೀಡಿತವಾಗಿದೆ ಎಂದು ಹೇಳಲಾದ ಗ್ರಾಮಗಳ ಪರಿವೀಕ್ಷಣೆ ಮಾಡಿ ಶೀತಪೀಡಿತವಾಗಿರುವ ಬಗ್ಗೆ ಶಿಫಾರಸ್ಸು ಮಾಡಲು ಪ್ರಾದೇಶಿಕ ಆಯುಕ್ತರು, ಮೈಸೂರು ರವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ಸರ್ಕಾರದ ಕಂದಾಯ ಇಲಾಖೆ ಆದೇಶ ಸಂಖ್ಯೆ: ಕಂಇ 215 ಆರ್ಇಹೆಚ್ 2008, ದಿನಾಂಕ: 11-12-2008, ರಲ್ಲಿ ರಚಿಸಲಾಗಿದೆ. ಹಾಸನ ತಾಲ್ಲೂಕು ಗೊರೂರು ಗ್ರಾಮ ಹೇಮಾವತಿ ಜಲಾಶಯದ ಕೆಳಭಾಗದಲ್ಲಿನ ಗ್ರಾಮವಾಗಿದ್ದು; ಗ್ರಾಮವು ಶೀತಪೀಡಿತವಾಗಿರುವ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸಲು ಸದರಿ ಸಮಿತಿಯು ಸೂಕ್ತ ನಿರ್ಣಯ ತೆಗೆದುಕೊಳ್ಳಲು ಅಗತ್ಯವಾಗಿರುವ ಮಾಹಿತಿಗಳನ್ನು ಸಮಿತಿಗೆ ಒದಿಗಸಲಾಗಿದೆ. ಸಮಿತಿಯು ದಿನಾಂಕ: 27-07-2011 ಮತ್ತು 28-01-2012 ರಲ್ಲಿ ಗೊರೂರು ಗ್ರಾಮದ ಸ್ಥಳ ಪರಿಶೀಲನೆಯನ್ನು ಮಾಡಿರುತ್ತದೆ ಹಾಗೂ ವರದಿಯನ್ನು ಸರ್ಕಾರಕ್ಕೆ ಕಳುಹಿಸಲು ಬಾಕಿ ಇರುತ್ತದೆ.

ಕಂದಾಯ ಇಲಾಖೆಯ ಶಿಫಾರಸ್ಸಿನನ್ವಯ ಮುಂದಿನ ಕ್ರಮ ಜರುಗಿಸಲಾಗುವುದು.

ಜಾನಪದ ಅಧ್ಯಯನ ಕೇಂದ್ರ

37 (463), ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್ (ಗುಂಡ್ಲುಪೇಟೆ)

ಪ್ರಶ್ನೆ

ಅ) ಶ್ರೀ ಮಲೈಮಹದೇಶ್ವರ ಬೆಟ್ಟದಲ್ಲಿ ಜಾನಪದ ಅಧ್ಯಯನ ಕೇಂದ್ರಕ್ಕೆ 2010-11, 2011-12ನೇ ಸಾಲಿನಲ್ಲಿ ಬಿಡುಗಡೆ ಆದ ಅನುದಾನ ಎಷ್ಟು;

2012-13ನೇ ಸಾಲಿನಲ್ಲಿ ನಿಗದಿಪಡಿಸಿರುವ ಅನುದಾನ ಎಷ್ಟು;

ಆ) ಬಿಡುಗಡೆ ಆದ ಅನುದಾನದಡಿ ಎಷ್ಟು ಹಣ ವೆಚ್ಚ ಮಾಡಲಾಗಿದೆ; ಯಾವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ? (ವಿವರ ಒದಗಿಸುವುದು)

ಶ್ರೀ ಗೋವಿಂದ ಎಂ.ಕಾರಜೋಳ ಮಾನ್ಯ (ಕನ್ನಡ ಮತ್ತು ಸಂಸ್ಕೃತಿ ಹಾಗೂ ಸಣ್ಣನೀರಾವರಿ ಸಚಿವರು)

ಉತ್ತರ

ಅ) 2010–11 ಮತ್ತು 2011–12ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡಿರುವುದಿಲ್ಲ.

2012–13ನೇ ಸಾಲಿನಲ್ಲಿ ಪ್ರತ್ಯೇಕವಾಗಿ ಅನುದಾನ ನಿಗದಿಪಡಿಸಿರುವುದಿಲ್ಲ.

ಆ) 2008–09ನೇ ಸಾಲಿನಲ್ಲಿ ರೂ.50.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿದ್ದು, ಕಾಮಗಾರಿಗಾಗಿ ರೂ.37.00 ಲಕ್ಷಗಳು ವೆಚ್ಚವಾಗಿರುತ್ತದೆ.

ಸಣ್ಣ ನೀರಾವರಿ ಇಲಾಖೆಯ ಯೋಜನೆಗಳು

52 (476), **ಶ್ರೀ ರಾಜಶೇಖರ ಬಸವರಾಜ ಪಾಟೀಲ್ (ಹುಮ್ನಾಬಾದ್)**

ಪ್ರಶ್ನೆಗಳು

ಅ) ಹುಮ್ನಾಬಾದ್ ಮತಕ್ಷೇತ್ರದಲ್ಲಿ ಎಷ್ಟು ಸಣ್ಣ ನೀರಾವರಿ ಯೋಜನೆಗಳನ್ನು ಮಂಜೂರು ಮಾಡಲಾಗಿದೆ;

ಆ) ಹಾಗಿದ್ದಲ್ಲಿ ಅದಕ್ಕೆ ಬಿಡುಗಡೆಯಾದ ಮೊತ್ತವೆಷ್ಟು?

ಶ್ರೀ ಗೋವಿಂದ ಎಂ. ಕಾರಜೋಳ (ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಉತ್ತರಗಳು

ಅ) ಹುಮ್ನಾಬಾದ್ ಮತಕ್ಷೇತ್ರದಲ್ಲಿ ಒಟ್ಟು 13 ಸಣ್ಣ ನೀರಾವರಿ ಯೋಜನೆಗಳನ್ನು ಮಂಜೂರು ಮಾಡಲಾಗಿದೆ. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ನೀರಾವರಿ ಸೌಲಭ್ಯವನ್ನು ಒದಗಿಸಲು ವಿಶೇಷ ಘಟಕ ಯೊಜನೆಯಡಿ 31 ಕಾಮಗಾರಿಗಳನ್ನು ಹಾಗೂ ಗಿರಿಜನ ಉಪಯೋಜನೆಯಡಿ 14 ಕಾಮಗಾರಿಗಳನ್ನು ಮಂಜೂರು ಮಾಡಲಾಗಿದೆ.